**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವನ್ನು ಬಲಪಡಿಸಲು ಮಂಜೂರಾಗಿರುವ ವಿಪತ್ತು ನಿರ್ವಹಣಾ ಪರಿಣಿತರ ಮಾಸಿಕ ಸಂಭಾವನೆಗಾಗಿ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 30 ಟಿಎನ್‌ಆರ್ 2022, ದಿನಾಂಕ: 21.07.2023.
2. ಸರ್ಕಾರದ ಆದೇಶ ಸಂಖ್ಯೆ: ಕಂಇ 266 ಟಿಎನ್‌ಆರ್ 2023, ದಿನಾಂಕ: 16.09.2023.
3. ದಿನಾಂಕ: 12.03.2024 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ನಡವಳಿ.
4. ಸರ್ಕಾರದ ಆದೇಶ ಸಂಖ್ಯೆ: ಕಂಇ 154 ಟಿಎನ್‌ಆರ್ 2024, ದಿನಾಂಕ: 19.04.2024.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆದೇಶದಲ್ಲಿ ಗದಗ ಹಾಗೂ ಕಲಬುರಗಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳನ್ನು ಬಲಪಡಿಸುವ ಸಲುವಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಯನ್ನು ದಿನಾಂಕ: 01.04.2023 ರಿಂದ ಜಾರಿಗೆ ಬರುವಂತೆ ಮುಂದಿನ ಒಂದು ವರ್ಷದ ಅವಧಿಗೆ ಮುಂದುವರೆಸಿ, 2023-24 ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ – ಕೆಪಾಸಿಟಿ ಬಿಲ್ಡಿಂಗ್ (Capacity Building) ರಡಿ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಆದೇಶದಲ್ಲಿ ಗದಗ ಹಾಗೂ ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಇನ್ನುಳಿದ 29 ಜಿಲ್ಲೆಗಳ ವಿಪತ್ತು ನಿರ್ವಹಣಾ ಪ್ರಾಧಿಕಾರಗಳನ್ನು ಬಲಪಡಿಸುವ ಸಲುವಾಗಿ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಯನ್ನು ದಿನಾಂಕ: 01.04.2023 ರಿಂದ ಜಾರಿಗೆ ಬರುವಂತೆ ಮುಂದಿನ ಒಂದು ವರ್ಷದ ಅವಧಿಗೆ ಮುಂದುವರೆಸಿ, 2023-24 ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ – ಕೆಪಾಸಿಟಿ ಬಿಲ್ಡಿಂಗ್ (Capacity Building) ರಡಿ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಂತೆ ದಿ: 12.03.2024 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ರಾಜ್ಯ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳನ್ನು ಬಲಪಡಿಸಿ ವಿಪತ್ತುಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ವಿಪತ್ತು ನಿರ್ವಹಣಾ ಪರಿಣಿತರ ಸೇವೆಯು ಅವಶ್ಯಕವಾಗಿರುವುದರಿಂದ ಮುಂದಿನ ಒಂದು ವರ್ಷದ ಅವಧಿಗೆ ಮುಂದುವರೆಸಲು ಸಮಿತಿಯಲ್ಲಿ ತೀರ್ಮಾನಿಸಲಾಗಿರುತ್ತದೆ. ಅದರಂತೆ ಎಲ್ಲಾ ಜಿಲ್ಲೆಯ ವಿಪತ್ತು ನಿರ್ವಹಣಾ ಪರಿಣಿತರುಗಳ ಸೇವೆಯನ್ನು ದಿ: 01.04.2024 ರಂದು 01 ದಿನದ Service Break ನೀಡಿ ದಿ: 02.04.2024 ರಿಂದ ದಿ: 31.03.2025 ರ ವರೆಗೆ ಮುಂದುವರೆಸಿ ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಆದೇಶದಲ್ಲಿ ಆದೇಶಿಸಲಾಗಿದ್ದು, ಸದರಿ ವಿಪತ್ತು ನಿರ್ವಹಣಾ ಪರಿಣಿತರುಗಳಿಗೆ ಮಾಸಿಕ

.....2

ರೂ. 48,400/- ರಂತೆ ಸಂಭಾವನೆ ಪಾವತಿಸಲು ಪ್ರತಿ ಜಿಲ್ಲೆಗೆ ರೂ. 5,80,800/- (ಐದು ಲಕ್ಷದ ಎಂಬತ್ತು ಸಾವಿರದ ಎಂಟು ನೂರು) ರಂತೆ 31 ಜಿಲ್ಲೆಗಳಿಗೆ ತಗುಲುವ ರೂ. 1,80,04,800/- (ಒಂದು ಕೋಟಿ ಎಂಬತ್ತು ಲಕ್ಷದ ನಾಲ್ಕು ಸಾವಿರದ ಎಂಟು ನೂರು) ಗಳನ್ನು ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 154 ಟಿಎನ್ಆರ್ 2024;**
**ಬೆಂಗಳೂರು, ದಿನಾಂಕ: 29.05.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವನ್ನು ಬಲಪಡಿಸಲು ಪ್ರತಿ ಜಿಲ್ಲೆಗೆ ತಲಾ ಒಬ್ಬರಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತರ ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ದಿನಾಂಕ: 02.04.2024 ರಿಂದ ದಿನಾಂಕ: 31.03.2025 ರ ವರೆಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾಸಿಕ ಸಂಭಾವನೆ ರೂ. 48,400/-ರಂತೆ ಪಾವತಿಸಲು ಪ್ರತಿ ಜಿಲ್ಲೆಗೆ ರೂ. 5,80,800/- (ಐದು ಲಕ್ಷದ ಎಂಬತ್ತು ಸಾವಿರದ ಎಂಟು ನೂರು) ರಂತೆ ಒಟ್ಟು 31 ಜಿಲ್ಲೆಗಳಿಗೆ ತಗುಲುವ ರೂ. 1,80,04,800/- (ಒಂದು ಕೋಟಿ ಎಂಬತ್ತು ಲಕ್ಷದ ನಾಲ್ಕು ಸಾವಿರದ ಎಂಟು ನೂರು) ಗಳನ್ನು 2024-25ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ ಲೆಕ್ಕ ಶೀರ್ಷಿಕೆ 2245~80~102~0~01~051 (Capacity Building) ರಡಿ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅನುದಾನವನ್ನು ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟು ಬಿಡುಗಡೆ ಮಾಡಲು ಸರ್ಕಾರವು ಮಂಜೂರಾತಿ ನೀಡಿದೆ.

**ಷರತ್ತುಗಳು:**

1. ವಿಪತ್ತು ನಿರ್ವಹಣಾ ಪರಿಣಿತರಿಗೆ ನಿಗಧಿಪಡಿಸಿರುವ ಜವಾಬ್ದಾರಿ ಮತ್ತು ಹೊಣೆಗಾರಿಕೆ ಆಧಾರದ ಮೇಲೆ ಪ್ರತಿ ತಿಂಗಳು ಆರ್ಥಿಕ ಮತ್ತು ಭೌತಿಕ ಪ್ರಗತಿ ವರದಿಯನ್ನು ಜಿಲ್ಲಾಧಿಕಾರಿಗಳು ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸುವುದು.

2. ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸುವುದು, ಅನುದಾನ ವೆಚ್ಚ ಮಾಡಿದಕ್ಕೆ ಸಂಬಂಧಿಸಿದಂತೆ ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳ ಮೇಲುರುಜುವಿನೊಂದಿಗೆ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು ಹಾಗೂ ಯೋಜನಾ ಕಾರ್ಯವನ್ನು ಅಗತ್ಯಕ್ಕನುಗುಣವಾಗಿ ನಿಗಧಿಪಡಿಸಿರುವ ಸಮಯದೊಳಗೆ ಪೂರ್ಣಗೊಳಿಸುವುದು.

3. ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ಕಾಲ ಕಾಲಕ್ಕೆ ಹೊರಡಿಸಿರುವ ಆದೇಶ, ಸುತ್ತೋಲೆಗಳನ್ನು ಪಾಲಿಸತಕ್ಕದ್ದು.

4. ಸರ್ಕಾರದಿಂದ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ನೀಡುವಂತಹ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ ವಿಪತ್ತು ನಿರ್ವಹಣೆಯ ಎಲ್ಲಾ ಕಾರ್ಯಗಳಲ್ಲೂ ಸಹಕರಿಸುವುದು.

ಮೇಲಿನಂತೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿಗಳು ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಲೆಕ್ಕಶೀರ್ಷಿಕೆ:"2245~80~102~0~01~051" ಅಡಿಯಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಡ್ರಾಯಿಂಗ್ (DDO) ಕೋಡ್‌ಗೆ ಅನುದಾನವನ್ನು ಅಪ್‌ಲೋಡ್ ಮಾಡುವುದು.

.....3

ಮೇಲಿನಂತೆ ಬಿಡುಗಡೆ ಮಾಡಿದ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಪೇಯಿಸ್ ರಶೀದಿ ಮೂಲಕ ತಮ್ಮ ಪಿ.ಡಿ. ಖಾತೆಗೆ ಜಮೆ ಮಾಡಿಕೊಳ್ಳತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 523 ವೆಚ್ಚ-7/2024, ದಿನಾಂಕ: 17.05.2024 ರಲ್ಲಿ ನೀಡಿರುವ ಸಹಮತಿಯ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

H-G 29/5/2024
**(ಮುಕ್ತಾರ್ ಪಾಷ .ಹೆಚ್.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3).

**ಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಆಯುಕ್ತರು, ಖಜಾನೆ ಇಲಾಖೆ, ವಿವಿ ಟವರ್, ಬೆಂಗಳೂರು-01.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಇವರ ಆಪ್ತ ಸಹಾಯಕರು ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ ಮತ್ತು ನೋಂ & ಮು) ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಕಂದಾಯ ಇಲಾಖೆ (ವಿ.ನಿ) ಲೆಕ್ಕ ಪತ್ರ ಶಾಖೆ.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.